# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** 1) ಶ್ರೀ ಲೋಕೇಶ್ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರೇಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ 2) ಶ್ರೀ ನರಹರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹರವೆ ಗ್ರಾಮ ಪಂಚಾಯಿತಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ಸ್ವೀಕೃತಿಸಂಖ್ಯೆ: D.O.No. Compt//Uplok/MYS/1970/2015/DRE-4, ದಿನಾಂಕ: 09.10.2018.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 09.10.2018 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಸಿ.ಬಿ.ಚಂದ್ರೇಗೌಡ ಬಿನ್ ಬೇಲೂರೇ ಗೌಡ ರವರು ತಮ್ಮ ದೂರಿನಲ್ಲಿ 1) ಶ್ರೀ ಲೋಕೇಶ್ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರೇಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ ಮತ್ತು 2) ಶ್ರೀ ನರಹರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹರವೆ ಗ್ರಾಮ ಪಂಚಾಯಿತಿ (ಇನ್ನು ಮುಂದೆ 1 ಮತ್ತು 2ನೇ ಎದುರುದಾರರು ಎಂದು ಕ್ರಮವಾಗಿ, ಕರೆಯಲ್ಪಡುತ್ತಾರೆ) ಇವರುಗಳ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿರುತ್ತಾರೆ.

**ದೂರಿನ ಸಂಕ್ಷಿಪ್ತ ವಿವರಣೆ:–** ಎಂಜಿಎನ್‌ಆರ್‌ಇಜಿಎ ಯೋಜನೆ ಅಡಿಯಲ್ಲಿ ಕೆಲಸ ನಿರ್ವಹಿಸಿದ್ದರೂ ಸಹ ಅವರಿಗೆ ಯಾವುದೇ ಭತ್ಯೆಯನ್ನು ನೀಡದೇ ಕರ್ತವ್ಯ ಲೋಪ ಎಸಗಿರುವುದಾಗಿ ಆಪಾದಿಸಿದ್ದಾರೆ.

ದೂರಿಗೆ ಎದುರುದಾರರುಗಳಿಂದ ಆಕ್ಷೇಪಣೆಯನ್ನು ಕೇಳಲಾಗಿ, 1 ಮತ್ತು 2ನೇ ಎದುರುದಾರರು ತಮ್ಮ ಆಕ್ಷೇಪಣೆಗಳಲ್ಲಿ:– ಎಂಜಿಎನ್‌ಆರ್‌ಇಜಿಎ ಯೋಜನೆಯ ಅಧಿಸೂಚನೆ ಪ್ರಕಾರ ದೂರುದಾರರು ಕೆಲಸವನ್ನು ಕೋರಿ ಅರ್ಜಿಯನ್ನು ಕೊಟ್ಟಿಲ್ಲ, ಕೆಲಸ ಮಾಡಲು ಅವರಿಗೆ ಆದೇಶ ನೀಡಿಲ್ಲ ಹಾಗೂ ಎನ್‌ಎಂಆರ್ (ಹಾಜರಾತಿ ಪಟ್ಟಿ) ಅನ್ನು ಜನರೇಟ್ ಮಾಡಿಲ್ಲ. ದೂರುದಾರರು ಸಲ್ಲಿಸಿರುವ ದೂರಿನಲ್ಲಿ ಹುರುಳಿಲ್ಲ, ಕಾರಣ ದೂರನ್ನು ಕೈಬಿಡಲು ಕೋರಿದ್ದಾರೆ.

ಶ್ರೀ ಹೆಚ್.ವಿ.ನರೇಂದ್ರ ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು-01, ಹಾರಂಗಿ ಎಡದಂಡೆ ನಾಲೆ ಉಪ ವಿಭಾಗ, ಕಿತ್ತೂರು ರವರನ್ನು 3ನೇ ಎದುರುದಾರರನ್ನಾಗಿ ಮುಖಪುಟದಲ್ಲಿ ಸೇರಿಸಿ, ಸದರಿಯವರಿಂದ ದೂರಿಗೆ ಆಕ್ಷೇಪಣೆಯನ್ನು ಕೇಳಲಾಗಿ, ತಮ್ಮ ಆಕ್ಷೇಪಣೆಯಲ್ಲಿ:– ತಾವು ದಿನಾಂಕ:30–10–2016 ರಿಂದ 27–03–2010 ರವರೆಗೆ ಹಾರಂಗಿ ಎಡದಂಡೆ ಉಪವಿಭಾಗ ಕಿತ್ತೂರಿನಲ್ಲಿ ಸಹಾಯಕ ಅಭಿಯಂತರರಾಗಿ ಕಾರ್ಯನಿರ್ವಹಿಸುತ್ತಿದ್ದು, ತಾವು ಮತ್ತು ಹಿಂದಿನ ಸಹಾಯಕ ಕಾರ್ಯಪಾಲಕ ಅಭಿಯಂತರರು ಸೇರಿ ಹಾರಂಗಿ ಜಲಾಶಯದ ಹೂಳು ಮತ್ತು ಜಂಗಲ್ ತೆಗೆಯುವ ಯೋಜನೆ ಬಗ್ಗೆ ವರದಿಯನ್ನು ತಯಾರಿಸಿದೆ. ಸದರಿ ಕಾರ್ಯದ ಆಡಳಿತಾತ್ಮಕ ಅನುಮೋದನೆಯನ್ನು ಹಿರೇಕ್ಯಾತನಹಳ್ಳಿ ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ದಿನಾಂಕ:04–08–2009 ರಂದು ನೀಡಿದ್ದಾರೆ. ಸದರಿ ಕೆಲಸವನ್ನು ಗ್ರಾಮಸ್ಥರ ಮುಖಾಂತರ ದೂರುದಾರರ ನೇತೃತ್ವದಲ್ಲಿ ಮಾಡಿಸಲಾಗಿದೆ. ಕಾಲಾವಕಾಶದ ಕೊರತೆಯಿಂದಾಗಿ ಕೂಲಿಗಾರರಿಗೆ ವೇತನವನ್ನು ದೂರುದಾರರೇ ನೀಡಿದ್ದಾರೆ. ಆದರೆ, ಕೂಲಿಗಾರರಿಗೆ ಎಂಜಿಎನ್‌ಆರ್‌ಇಜಿಎ ಯೋಜನೆಯಡಿ ಕಾರ್ಯನಿರ್ವಹಿಸಲು ಉದ್ಯೋಗ ಚೀಟಿಯನ್ನು ನೀಡಿಲ್ಲ. ಇದಾದ ನಂತರ ದೂರುದಾರರು ಹಾಗೂ ತಾಲ್ಲೂಕು ಪಂಚಾಯತ್ ಅಧಿಕಾರಿಗಳ ಮಧ್ಯೆ ಮನಸ್ತಾಪ ಬಂದಿದ್ದರಿಂದ, ದೂರುದಾರರು ಎಂಜಿಎನ್‌ಆರ್‌ಇಜಿಎ ಯೋಜನೆ ಒಂಬುಡ್ಸ್‌ಮನ್, ಜಿಲ್ಲಾ ಪಂಚಾಯಿತಿ, ಮೈಸೂರು ರವರ ಮುಂದೆ ದೂರು ಸಂಖ್ಯೆ:43/2013ನ್ನು ಕಾರ್ಯಕ್ರಮಾಧಿಕಾರಿ, ಹುಣಸೂರು ತಾಲ್ಲೂಕು, ಪಂಚಾಯತ್ ರವರ ವಿರುದ್ಧ ದೂರು ಸಲ್ಲಿಸಿದ್ದರ ವಿಚಾರಣೆ ನಡೆದು, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ರವರು ಕೂಲಿಗಾರರಿಗೆ 60 ದಿನಗಳೊಳಗಾಗಿ ಶೇ.12.% ಬಡ್ಡಿಯೊಂದಿಗೆ ಕೂಲಿ ಹಣವನ್ನು ಸಂದಾಯ ಮಾಡಬೇಕೆಂದು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿರವರು ಎಂಐಎಸ್ ಜನರೇಟ್ ಮಾಡದಿದ್ದ ಕಾರಣ ರೂ.5,000/–ಗಳನ್ನು ಖರ್ಚು ಭರಿಸಬೇಕೆಂದು ದಿನಾಂಕ:04.06.2013ರಂದು ಒಂಬುಡ್ಸ್‌ಮನ್ ರವರು ಆದೇಶವನ್ನು ಹೊರಡಿಸಿದ್ದಾರೆ. ಕೂಲಿಗಾರರಿಗೆ ಕೂಲಿ ಹಣವನ್ನು ಸಂದಾಯವಾಗದೇ ಇರಲು ತಾವು ಜವಾಬ್ದಾರರಲ್ಲವೆಂದು ಹೇಳಿದ್ದಾರೆ.

1 ಮತ್ತು 2ನೇ ಎದುರುದಾರರು ಹಾಗೂ 3ನೇ ಎದುರುದಾರರ ಆಕ್ಷೇಪಣೆಗಳು ಒಂದಕ್ಕೊಂದು ವ್ಯತಿರಿಕ್ತವಾಗಿದೆ. ಓಂಬುಡ್ಸ್‌ಮನ್ ರವರ ಆದೇಶ ಮತ್ತು 3ನೇ ಎದುರುದಾರರ ಆಕ್ಷೇಪಣೆಯ ಅಂಶಗಳನ್ನು ಪರಿಗಣಿಸಿದಾಗ ದೂರುದಾರರು ಹಿರೇಕ್ಯಾತನಹಳ್ಳಿ ಗ್ರಾಮ ಪಂಚಾಯತ್ ಎಂಜಿಎನ್‌ಆರ್‌ಇಜಿಎ ಯೋಜನೆ ಅಡಿ 2009-10ನೇ ಸಾಲಿನಲ್ಲಿ ಕಾರ್ಯನಿರ್ವಹಿಸಿರುವುದು ಸ್ಪಷ್ಟವಾಗಿ ಕಂಡು ಬಂದಿದ್ದು, ಆ ಬಾಬ್ತು ದೂರುದರರು ಮತ್ತು ಇತರೆ ಕೂಲಿಗಾರರಿಗೆ ವೇತನ ಪಾವತಿಯಾಗದೇ ಇರುವ ಬಗ್ಗೆ ದೂರುದಾರರು ಮೈಸೂರು ಜಿಲ್ಲಾ ಪಂಚಾಯತ್ ಓಂಬುಡ್ಸ್‌ಮನ್ ನ್ಯಾಯಾಲಯದಲ್ಲಿ ದೂರು ಸಲ್ಲಿಸಿದ ನಂತರ ದೂರುದಾರರಿಗೆ ರೂ.40,000/-ಗಳನ್ನು ಸಂದಾಯ ಮಾಡಿರುತ್ತಾರೆಂದು ಕಂಡು ಬಂದಿದೆ ಮತ್ತು ಓಂಬುಡ್ಸ್‌ಮನ್ ರವರ ಆದೇಶ ಸಂಖ್ಯೆ:ಎಂಪ್ಯಎಸ್/ ಜಿಪಂ/ಓಎಂಬಿ/ಆದೇಶ-92/12-13 ದಿನಾಂಕ:04.06.2013ರಲ್ಲಿ 60 ದಿನಗಳೊಳಗಾಗಿ ಬಡ್ಡಿ ಸಮೇತ ಹಣ ಪಾವತಿಸುವಂತೆ ಆದೇಶಿಸಿರುತ್ತಾರೆ.

ಮೇಲ್ಕಂಡ ಅಂಶಗಳು, ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣವಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಾಮಗಳು 1966ರ ನಿಯಮ 3(1)ರ ದುರ್ನಡತೆ/ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾದ್ಯರಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರನ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/491/ಗ್ರಾಪಂಕಾ/2018**

**ಬೆಂಗಳೂರು, ದಿನಾಂಕ: 07-02-2019.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ 1) ಶ್ರೀ ಲೋಕೇಶ್ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರೇಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ 2) ಶ್ರೀ ನರಹರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹರವೆ ಗ್ರಾಮ ಪಂಚಾಯಿತಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

8/2/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಹಿಂದಿರುಗಿಸಿದೆ. ಪುಟ ಸಂಖ್ಯೆ: 1 ರಿಂದ 59).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.
6. ಶ್ರೀ ಲೋಕೇಶ್ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರೇಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.
7. ಶ್ರೀ ನರಹರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹರವೆ ಗ್ರಾಮ ಪಂಚಾಯಿತಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
9. ಗಣಕ ಕೋಶ.